ಕರ್ನಾಟಕ ಸರ್ಕಾರ
(ಸಾರಿಗೆ ಇಲಾಖೆ)

ಸಂ: ಸಾಆ/ಸಿಬ್ಬಂದಿ-04/ವೈವ-69/2014-15

ಸಾರಿಗೆ ಮತ್ತು ರಸ್ತೆ ಸುರಕ್ಷತೆ
ಆಯುಕ್ತರ ಕಛೇರಿ, 1ನೇ ಮಹಡಿ,
ಬಿ.ಎಂ.ಟಿ.ಸಿ. ಸಂಕೀರ್ಣ, ಕೆ. ಹೆಚ್. ರಸ್ತೆ,
ಶಾಂತಿನಗರ ಬೆಂಗಳೂರು-27
ದಿನಾಂಕ: 23-02-2024.

ಇವರಿಗೆ,

"ಅತೀ ಜರೂರು"

ರಾಜ್ಯದ ಎಲ್ಲಾ ಜಂಟಿ ಸಾರಿಗೆ ಆಯುಕ್ತರು,
ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ,
ಪ್ರಾದೇಶಿಕ/ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು.

ಮಾನ್ಯರೆ,

ವಿಷಯ : ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಸಂಬಂಧ ಸಾರಿಗೆ ಇಲಾಖೆಯಲ್ಲಿ ಹೊಸದಾಗಿ ನೇಮಕಗೊಂಡ ಮೋಟಾರು ವಾಹನ ನಿರೀಕ್ಷಕರಿಂದ ಸ್ಥಳೀಯ ವೃಂದದ / ಉಳಿಕೆ ಮೂಲ ವೃಂದದ ಆಯ್ಕೆ ಸಲುವಾಗಿ ಅಭಿಮತ ಕೋರಿಕೆ.

ಉಲ್ಲೇಖ : ಈ ಕಛೇರಿಯ ಇದೇ ಸಂಖ್ಯೆಯ ಪತ್ರ ದಿನಾಂಕ: 10-01-2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಕಛೇರಿಯ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಸಾಆ/ಸಿಬ್ಬಂದಿ-04/ವೈವ-122/2003-04, ದಿನಾಂಕ: 23-03-2023 ರ ಆದೇಶದಂತೆ ನೇಮಕಗೊಂಡಿರುವ 33 ಮೋಟಾರು ವಾಹನ ನಿರೀಕ್ಷಕರುಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರಂತೆ ಮೀಸಲಾತಿಯನ್ನು ಆಯ್ಕೆ ಮಾಡಿಕೊಳ್ಳಲು ಇಚ್ಛಿಸಿದ್ದಲ್ಲಿ, ಅವರಿಂದ ಸಕ್ಷಮ ಪ್ರಾಧಿಕಾರಿಯಿಂದ ಪಡೆದ ಕಲ್ಯಾಣ ಕರ್ನಾಟಕ ಮೀಸಲಾತಿಯ (371 (ಜೆ) (ಉದ್ಯೋಗಕ್ಕೆ ಸಂಬಂಧಿಸಿದ)) ಪ್ರಮಾಣ ಪತ್ರಗಳನ್ನು ಪಡೆದು ಕೂಡಲೇ ಈ ಕಛೇರಿಗೆ ಸಲ್ಲಿಸುವಂತೆ ಉಲ್ಲೇಖಿತ ಪತ್ರದಲ್ಲಿ ರಾಜ್ಯದ ಎಲ್ಲಾ ಅಧೀನ ಕಛೇರಿಯ ಮುಖ್ಯಸ್ಥರುಗಳಿಗೆ ತಿಳಿಸಲಾಗಿರುತ್ತದೆ.

ಆದರೆ ಇದುವರೆವಿಗೂ ಹೊಸದಾಗಿ ನೇಮಕಗೊಂಡ ಮೋಟಾರು ವಾಹನ ನಿರೀಕ್ಷಕರುಗಳ ಪೈಕಿ ಯಾರ ಅಭಿಮತವನ್ನೂ ಸಹ ಈ ಕಛೇರಿಯಲ್ಲಿ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಸದರಿ 33 ಮೋಟಾರು ವಾಹನ ನಿರೀಕ್ಷಕರುಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರಂತೆ ಮೀಸಲಾತಿಯನ್ನು ಆಯ್ಕೆ ಮಾಡಿಕೊಳ್ಳಲು ಇಚ್ಛಿಸಿದ್ದಲ್ಲಿ, ಅವರಿಂದ ಸಕ್ಷಮ ಪ್ರಾಧಿಕಾರಿಯಿಂದ ಪಡೆದ ಕಲ್ಯಾಣ ಕರ್ನಾಟಕ ಮೀಸಲಾತಿಯ (371 (ಜೆ) (ಉದ್ಯೋಗಕ್ಕೆ ಸಂಬಂಧಿಸಿದ)) ಪ್ರಮಾಣ ಪತ್ರಗಳನ್ನು ಪಡೆದು **ದಿನಾಂಕ: 07-03-2024** ರೊಳಗಾಗಿ ಈ ಕಛೇರಿಗೆ ಸಲ್ಲಿಸುವಂತೆ ಒಂದು ವೇಳೆ ನೀಡಿರುವ ಅವಧಿಯೊಳಗಡೆ ಅಭಿಮತವನ್ನು ದಾಖಲೆಗಳೊಂದಿಗೆ ಸಲ್ಲಿಸದಿದ್ದಲ್ಲಿ ನಿಯಮಾನುಸಾರ ಮುಂದಿನ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಮತ್ತೊಮ್ಮೆ ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಸಾರಿಗೆ ಮತ್ತು ರಸ್ತೆ ಸುರಕ್ಷತೆ,
ಬೆಂಗಳೂರು.

Scanned with CamScanner